ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

ಉಪಸ್ಥಿತರು: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕೊರೋನ ವೈರಸ್ (ಕೋವಿಡ್-19) ಹರಡದಂತೆ ಹೊರಡಿಸಲಾದ ತೆರವು-2 ಮಾರ್ಗಸೂಚಿಗಳು ಮುಂದುವರೆದಂತೆ ದಿನಾಂಕ: 14.07.2020 ರ ರಾತ್ರಿ 8.00 ಗಂಟೆಯಿಂದ ದಿನಾಂಕ: 22-07-2020 ರ ಬೆಳಗ್ಗೆ 05.00 ಗಂಟೆಯವರೆಗೆ ಸರ್ಕಾರ ಹೊರಡಿಸಿರುವ ಲಾಕ್‌ಡೌನ್ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಸುವ ಸಂಬಂಧ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

ಉಲ್ಲೇಖ : ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಅವರ ಆದೇಶ ಸಂಖ್ಯೆ: ಆರ್‌ಡಿ/158/ಟಿಎನ್‌ಆರ್/2020, ದಿನಾಂಕ: 13.07.2020

-----

ಪ್ರಸ್ತಾವನೆ:

ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಆರ್‌ಡಿ/158/ಪಿಎನ್‌ಆರ್/2020, ದಿನಾಂಕ: 30.06.2020 ರಲ್ಲಿ ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಬಗ್ಗೆ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ನಿಷೇಧಿತ ಕಾರ್ಯಚಟುವಟಿಕೆಗಳನ್ನು ಕ್ರಮೇಣವಾಗಿ ಪುನರ್ ಪ್ರಾರಂಭಿಸಲು ತೆರವು-2 ಮಾರ್ಗಸೂಚಿಗಳನ್ನು ಹಾಗೂ ಕಂಟೈನ್‌ಮೆಂಟ್ ವಲಯಗಳ ಪ್ರದೇಶಗಳಲ್ಲಿ ಲಾಕ್‌ಡೌನ್ ಅನ್ನು ವಿಸ್ತರಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಇವುಗಳು ದಿನಾಂಕ: 31.07.2020 ರವರೆಗೆ ಜಾರಿಯಲ್ಲಿರುತ್ತದೆ. ಬೆಂಗಳೂರು ಪ್ರದೇಶದಲ್ಲಿ ಕಳೆದ 2 ವಾರಗಳಿಂದೀಚೆಗೆ ಕೋವಿಡ್-19 ಹರಡುವಿಕೆಯ ಪ್ರಕರಣಗಳು ತೀವ್ರವಾಗಿ ಹೆಚ್ಚಳವಾದ ಹಿನ್ನೆಲೆಯಲ್ಲಿ ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಹಾಗೂ ಹತೋಟಿಗೆ ತರಲು ಮತ್ತಷ್ಟು ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವ ನಿಟ್ಟಿನಲ್ಲಿ ಸರ್ಕಾರವು ಉಲ್ಲೇಖಿತ ಆದೇಶದನ್ವಯ ತೆರವು-2 ರ ಮಾರ್ಗಸೂಚಿಗಳು ಮುಂದುವರೆದಂತೆ, ಬೆಂಗಳೂರು ನಗರ ವ್ಯಾಪ್ತಿಯಲ್ಲಿ ದಿನಾಂಕ: 14.07.2020 ರ ರಾತ್ರಿ 08.00 ಗಂಟೆಯಿಂದ ದಿನಾಂಕ: 22.07.2020 ರ ಬೆಳಗ್ಗೆ 05.00 ಗಂಟೆಯವರೆಗೆ 7 ದಿನಗಳ ಅವಧಿಯವರೆಗೆ ಲಾಕ್‌ಡೌನ್ ಆದೇಶ ಮಾಡಲಾಗಿದ್ದು, ಲಾಕ್‌ಡೌನ್ ಅವಧಿಯಲ್ಲಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳಸಬೇಕಾದ ಮಾರ್ಗಸೂಚಿಗಳು ಈ ಕೆಳಕಂಡಂತೆ ಇರುತ್ತವೆ.

1. **22ನೇ ಜುಲೈ 2020 ರ ಬೆಳಗ್ಗೆ 5.00 ಗಂಟೆಯವರೆಗೆ ಲಾಕ್‌ಡೌನ್ ಜಾರಿಯಲ್ಲಿರುತ್ತದೆ.**
2. **ರಾಜ್ಯ ಸರ್ಕಾರದ ಕಛೇರಿಗಳು ಮತ್ತು ಅವುಗಳ ಸ್ವಾಯತ್ತ ಸಂಸ್ಥೆಗಳು, ನಿಗಮ ಮುಂತಾದವುಗಳು ಮುಚ್ಚಿರತಕ್ಕದ್ದು.**

**ವಿನಾಯಿತಿಗಳು (ಕಂಟೈನ್‌ಮೆಂಟ್ ವಲಯದ ಹೊರಗೆ):**

ಎ) ಆರೋಗ್ಯ, ವೈದ್ಯಕೀಯ ಶಿಕ್ಷಣ, ಪೊಲೀಸ್, ಗೃಹ ರಕ್ಷಕ ದಳ, ನಾಗರಿಕ ರಕ್ಷಣೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ವಿಪತ್ತು ನಿರ್ವಹಣೆ, ಬಿಬಿಎಂಪಿ ಹಾಗೂ ಕಾರಾಗೃಹಗಳು.

ಬಿ) ವಿದ್ಯುತ್, ನೀರು, ನೈರ್ಮಲ್ಯ ಇತ್ಯಾದಿ ಅಗತ್ಯ ಸೇವೆಗಳನ್ನು ನಿರ್ವಹಿಸುವಂತ ಎಲ್ಲಾ ಕಛೇರಿಗಳು.

ಇ) ಬಿಬಿಎಂಪಿ ಹಾಗೂ ಅಧೀನ ಕಛೇರಿಗಳು, ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಛೇರಿ ಹಾಗೂ ಅಧೀನ ಕಛೇರಿಗಳು.

ಡಿ) ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿರುವ ಕಛೇರಿಗಳು ಶೇ.50 ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸುವುದು.

ಇ) ನ್ಯಾಯಾಲಯಗಳು ಹಾಗೂ ನ್ಯಾಯಾಂಗ ಕೆಲಸಗಳಿಗೆ ಸಂಬಂಧಿಸಿದ ಕಛೇರಿಗಳು-ಮಾನ್ಯ ಉಚ್ಛ ನ್ಯಾಯಾಲಯವು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಕಾರ್ಯ ನಿರ್ವಹಿಸತಕ್ಕದ್ದು.

ಎಫ್) ಕೋವಿಡ್-19 ಗೆ ಸಂಬಂಧಿಸಿದ ಕಾರ್ಯಕ್ಕೆ ನಿಯೋಜಿಸಿದ ಎಲ್ಲಾ ಕಛೇರಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು.

ಜಿ) ಆಯುಕ್ತರು, ಬಿಬಿಎಂಪಿ, ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಕೋವಿಡ್-19 ಗೆ ಸಂಬಂಧಿಸಿದ ಕಾರ್ಯಗಳಿಗೆ ನಿಯೋಜಿಸಿದ ಸರ್ಕಾರೇತರ ಸಂಸ್ಥೆಗಳ ಕಛೇರಿಗಳು ಹಾಗೂ ಸ್ವಯಂ ಸೇವಕರು, ಇತರೆ ಎಲ್ಲಾ ಕಛೇರಿಗಳು ತಮ್ಮ ಸಿಬ್ಬಂದಿಯನ್ನು ಮನೆಯಿಂದಲೇ ಕೆಲಸ ನಿರ್ವಹಿಸುವುದಕ್ಕೆ ಪ್ರೋತ್ಸಾಹಿಸುವುದು.

ಹೆಚ್) ರಾಜ್ಯ ಹುಜೂರ್ ಖಜಾನೆ ಹಾಗೂ ಅಧೀನ ಜಿಲ್ಲಾ ಖಜಾನೆಗಳು.

**3. ಕೇಂದ್ರ ಸರ್ಕಾರದ ಕಛೇರಿಗಳು, ಅದರ ಸ್ವಾಯತ್ತ/ಅಧೀನ ಕಛೇರಿಗಳು ಹಾಗೂ ಸಾರ್ವಜನಿಕ ಸಂಸ್ಥೆಗಳು ಮುಚ್ಚಿರತಕ್ಕದ್ದು.**

**ವಿನಾಯಿತಿಗಳು (ಕಂಟೈನ್‌ಮೆಂಟ್ ವಲಯದ ಹೊರಗೆ):**

ಎ) ರಕ್ಷಣೆ, ರಕ್ಷಣೆ ಪಿ.ಎಸ್.ಯುಗಳು, ಕೇಂದ್ರ ಸಶಸ್ತ್ರ, ಪೊಲೀಸ್ ಪಡೆ ಹಾಗೂ ದೂರ ಸಂಪರ್ಕ.

ಬಿ) ಅಗತ್ಯ ಸೇವೆಗಳನ್ನು ನಿರ್ವಹಿಸುವಂತ ಕಛೇರಿಗಳು.

ಸಿ) ಖಜಾನೆ (ವೇತನ ಮತ್ತು ಲೆಕ್ಕಪತ್ರಗಳ ಕಛೇರಿಗಳು, ಹಣಕಾಸು ಸಲಹೆಗಾರರು ಹಾಗೂ ಮಹಾ ಲೆಕ್ಕ ನಿಯಂತ್ರಕರ ಕ್ಷೇತ್ರ ಕಛೇರಿಗಳು ಕನಿಷ್ಟ ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸುವುದು).

ಡಿ) ಸಾರ್ವಜನಿಕ ಉಪಯುಕ್ತತೆಗಳು, ವಿದ್ಯುತ್ ಉತ್ಪಾದನೆ ಮತ್ತು ಪ್ರಸರಣ ಘಟಕಗಳು, ಅಂಚೆ ಕಛೇರಿಗಳು, ವಿಪತ್ತು ನಿರ್ವಹಣೆ ಹಾಗೂ ಮುನ್ಸೂಚನಾ ಏಜೆನ್ಸಿಗಳು (ಪೆಟ್ರೋಲ್, ಸಿ.ಎನ್.ಜಿ., ಎಲ್.ಪಿ.ಜಿ, ಪಿ.ಎನ್.ಜಿ, ಒಳಗೊಂಡಂತೆ)

ಇ) ರಾಷ್ಟ್ರೀಯ ಮಾಹಿತಿ ಕೇಂದ್ರಗಳು.

ಎಫ್) ವಿಮಾನ ನಿಲ್ದಾಣಗಳಲ್ಲಿ/ ಭೂ ಗಡಿಗಳಲ್ಲಿ ಕಾರ್ಯ ನಿರ್ವಹಿಸುವ ಕಸ್ಟಮ್‌ಗಳು, ಜಿ.ಎಸ್.ಟಿ.ಎನ್., ಎಂ.ಸಿ.ಎ.-21 ರಿಜಿಸ್ಟ್ರಿ, ಕನಿಷ್ಟ ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸುವುದು.

ಜಿ) ಬ್ಯಾಂಕ್‌ಗಳು, ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ಆರ್‌ಬಿಐ ನಿಯಂತ್ರಿತ ಹಣಕಾಸು ಮಾರುಕಟ್ಟೆ, NPCI & CCIL ನಂತಹ ಘಟಕಗಳು, ಪಾವತಿ ವ್ಯವಸ್ಥೆಯ ಪ್ರವರ್ತಕರು ಮತ್ತು ಸ್ವತಂತ್ರ ಪ್ರಾಥಮಿಕ ವ್ಯಾಪಾರಿಗಳು/ ಡೀಲರುಗಳು / ವಿತರಕರು ಕನಿಷ್ಠ ಸಂಖ್ಯೆಯ ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸುವುದು.

**4. ಎಲ್ಲಾ ಆರೋಗ್ಯ ಸೇವೆಗಳು (ಆಯುಷ್ ಮತ್ತು ಪಶು ವೈಧ್ಯಕೀಯ ಆಸ್ಪತ್ರೆಗಳು) ಕಾರ್ಯ ನಿರ್ವಹಿಸುವುದು: (ಕಂಟೈನ್‌ಮೆಂಟ್ ವಲಯದ ಹೊರಗೆ)**

ಎ) ಎಲ್ಲಾ ಆಸ್ಪತ್ರೆಗಳು, ನರ್ಸಿಂಗ್ ಹೋಂಗಳು, ಕ್ಲಿನಿಕ್‌ಗಳು, ಲ್ಯಾಬ್‌ಗಳು, ಸಂಗ್ರಹಣಾ ಕೇಂದ್ರಗಳು, ಮೆಡಿಸನ್ ಸೌಲಭ್ಯಗಳು, ಡಿಸ್ಪೆನ್ಸರಿಗಳು, ಫಾರ್ಮಸಿಗಳು, ಕೆಮಿಸ್ಟ್ ಜನ ಔಷಧಿ ಕೇಂದ್ರಗಳು, ಗೃಹ ಆರೈಕೆದಾರರು ಮತ್ತು ವೈಧ್ಯಕೀಯ ಉಪಕರಣಗಳ ಅಂಗಡಿಗಳು ಸೇರಿದಂತೆ ಎಲ್ಲಾ ಔಷಧ ಅಂಗಡಿಗಳು)

ಬಿ) ಎಲ್ಲಾ ಫಾರ್ಮಸಿಟಿಕಲ್ ಹಾಗೂ ರಿಸರ್ಚ್ ಲ್ಯಾಬ್‌ಗಳು.

ಸಿ) ಔಷಧಿಗಳು, ಔಷಧೀಯ ವೈಧ್ಯಕೀಯ ಸಾಧನಗಳು, ಮೆಡಿಕಲ್ ಆಕ್ಸಜನ್ ಅವುಗಳ ಪ್ಯಾಕಿಂಗ್ ಸಾಮಗ್ರಿ, ಕಚ್ಚಾ ಸಾಮಗ್ರಿ ಹಾಗೂ ಮಧ್ಯವರ್ತಿಗಳ ಎಲ್ಲಾ ತಯಾರಿಕಾ ಘಟಕಗಳು.

ಡಿ) ವೈಧ್ಯಕೀಯ / ಆರೋಗ್ಯ ಮೂಲ ಸೌಕರ್ಯಕ್ಕೆ ಸಂಬಂಧಿಸಿದ ಎಲ್ಲಾ ನಿರ್ಮಾಣಗಳು.

ಇ) ಎಲ್ಲಾ ವೈಧ್ಯಕೀಯ, ಅರೆ ವೈಧ್ಯಕೀಯ, ಶೂಶ್ರೂಷಕರು, ವಿಜ್ಞಾನಿಗಳು, ಲ್ಯಾಬ್ ಟೆಕ್ನಿಷಿಯನ್ಸ್‌ಗಳು, ಮಿಡ್-ವೈವ್ಸ್ ಹಾಗೂ ಇತರೆ ಆಸ್ಪತ್ರೆ ಪೂರಕ ಸೇವೆಗಳು (ಅಚಿತರ್ ರಾಜ್ಯ ಹಾಗೂ ರಾಜ್ಯದೊಳಗೆ ಮತ್ತು ಅಚಿತರ್ ಜಿಲ್ಲೆ ಹಾಗೂ ಜಿಲ್ಲೆಯೊಳಗೆ)

**5. ಕೃಷಿ ಹಾಗೂ ಕೃಷಿಗೆ ಸಂಬಂಧಿತ ಚಟುವಟಿಕೆಗಳು (ಕಂಟೈನ್‌ಮೆಂಟ್ ವಲಯದ ಹೊರಗೆ)**

**1) ಎಲ್ಲಾ ಕೃಷಿ ಹಾಗೂ ತೋಟಗಾರಿಕೆ ಚಟುವಟಿಕೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸುವುದು (ನಿರ್ಬಂಧಿತ ವಲಯ ಹೊರತುಪಡಿಸಿ)**

ಎ) ರೈತರು ಹಾಗೂ ಕೃಷಿ ಕಾರ್ಮಿಕರು ತಮ್ಮ ಕೃಷಿ ಜಮೀನಿನಲ್ಲಿ ಕಾರ್ಯ ನಿರ್ವಹಿಸುವುದು.

ಬಿ) ಕನಿಷ್ಟ ಬೆಂಬಲ ಬೆಲೆ ಪ್ರವರ್ತಕರು ಸೇರಿದಂತೆ ಕೃಷಿ ಉತ್ಪನ್ನಗಳ ಖರೀದಿಯಲ್ಲಿ ತೊಡಗಿರುವ ಏಜೆನ್ಸಿಗಳು.

ಸಿ) ಕೃಷಿ ಯಂತ್ರೋಪಕರಣಗಳು, ಅವುಗಳ ಬಿಡಿ ಭಾಗಗಳು (ಅವುಗಳ ಪೂರೈಕೆ ಸರಣಿ ಒಳಗೊಂಡಂತೆ) ಮತ್ತು ಅವುಗಳ ದುರಸ್ಥಿಗೆ ಸಂಬಂಧಿಸಿದಂತಹ ಮಳಿಗೆಗಳು ತೆರೆದಿರುತ್ತವೆ.

ಇ) ಕೃಷಿ ಯಂತ್ರಕ್ಕೆ ಸಂಬಂಧಿಸಿದ "ಕಸ್ಟಮ್ಸ್ ಹೈರಿಂಗ್ ಸೆಂಟರ್ಸ್".

ಎಫ್) ರಸಗೊಬ್ಬರ ಕೀಟನಾಶಕ ಹಾಗೂ ಬೀಜಗಳ ತಯಾರಿಕೆ ವಿತರಣೆ ಹಾಗೂ ಚಿಲ್ಲರೆ ಮಾರಾಟಗಾರರು.

ಜಿ) ಸಂಯೋಜಿತ ಕೋಯ್ಲು ಹಾಗೂ ಇತರೆ ಕೃಷಿ (ತೋಟಗಾರಿಕೆ ಸಲಕರಣೆಗಳಂತಹ ಕೋಯ್ಲು ಹಾಗೂ ಬಿತ್ತನೆ ಯಂತ್ರಗಳ ಸಾಗಣೆ) (ಅಂತರ್ ರಾಜ್ಯ ಹಾಗೂ ರಾಜ್ಯದೊಳಗೆ ಮತ್ತು ಅಂತರ್ ಜಿಲ್ಲೆ ಹಾಗೂ ಜಿಲ್ಲೆಯೊಳಗೆ).